# ಕರ್ನಾಟಕ ಸರ್ಕಾರದ ನಡವಳಿ

**ವಿಷಯ:** ಶ್ರೀಮತಿ ಗೀತಾ, ಅಧ್ಯಕ್ಷರು, ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಇವರ ವಿರುದ್ಧ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 43(ಎ) ರನ್ವಯ ಕ್ರಮ ಕೈಗೊಳ್ಳುವ ಬಗ್ಗೆ.

**ಓದಲಾಗಿದೆ:**

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ ರವರ ಪತ್ರ ಸಂಖ್ಯೆ: ಡಿಇವಿ-3/26/2017-18 ದಿನಾಂಕ : 08.06.2017
2. ಸರ್ಕಾರದ ಇದೇ ಸಮಸಂಖ್ಯೆಯ ದಿನಾಂಕ: 09-06-2017 ರ ಕಾರಣ ಕೇಳುವ ನೋಟೀಸ್.
3. ದಿನಾಂಕ: 09-06-2017 ರ ಕಾರಣ ಕೇಳುವ ನೋಟೀಸ್‌ಗೆ ನೀಡಿದ ಸಮಜಾಯಿಷಿ ದಿನಾಂಕ:20.06.2017

**ಪ್ರಸ್ತಾವನೆ :**

ಮೇಲೆ ಓದಲಾದ ಕ್ರಮ ಸಂಖ್ಯೆ (1) ರಲ್ಲಿ ಶ್ರೀಮತಿ ಗೀತಾ, ಅಧ್ಯಕ್ಷರು, ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ರವರ ವಿರುದ್ಧ ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿಯ ವ್ಯಾಪ್ತಿಯಲ್ಲಿ ಬರುವ ತಾವರೆಕಟ್ಟೆ ಗ್ರಾಮದಲ್ಲಿ ಪೌರಕಾರ್ಮಿಕರು ಒಳಚರಂಡಿಯ ಮ್ಯಾನ್‌ಹೋಲ್‌ಗೆ ಇಳಿದು ಶುಚಿಗೊಳಿಸಿರುವುದು ಸರ್ವೋಚ್ಛ ನ್ಯಾಯಾಲಯದ ತೀರ್ಪಿಗೆ ವಿರುದ್ಧವಾಗಿದೆ ಹಾಗೂ ಕಾನೂನಿಗೆ ವಿರುದ್ಧವಾಗಿದೆ ಎಂದು ದಿನಾಂಕ 07.06.2017 ರಂದು ವಿವಿಧ ದೃಶ್ಯ ಮಾಧ್ಯಮಗಳಲ್ಲಿ ವರದಿಯಾಗಿದ್ದು, ಅಪರಾಧ ಸಂಖ್ಯೆ 0164/2017 ರಲ್ಲಿ ಕೃಷ್ಣರಾಜ ಪೋಲೀಸ್ ಠಾಣೆಯಲ್ಲಿ ದೂರು ದಾಖಲಾಗಿದೆ. ಈ ಆರೋಪದ ಹಿನ್ನೆಲೆಯಲ್ಲಿ ತಮ್ಮ ವಿರುದ್ಧ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮಗಳು 1993 ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸುವಂತೆ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಮೈಸೂರು ಜಿಲ್ಲಾ ಪಂಚಾಯತಿ, ಮೈಸೂರು ಇವರು ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಿರುತ್ತಾರೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2) ರಲ್ಲಿ ಶ್ರೀಮತಿ ಗೀತಾ, ಅಧ್ಯಕ್ಷರು, ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಇವರಿಗೆ ದಿನಾಂಕ: 09-06-2017 ರಂದು ಕಾರಣ ಕೇಳುವ ನೋಟೀಸ್ ಜಾರಿಗೊಳಿಸಲಾಗಿದ್ದು, ಸದರಿ ಕಾರಣ ಕೇಳುವ ನೋಟೀಸಿಗೆ ಮೇಲೆ ಓದಲಾದ ಕ್ರಮ ಸಂಖ್ಯೆ (3) ರಲ್ಲಿ ತಮ್ಮ ಸಮಜಾಯಿಷಿ ನೀಡಿದ್ದು, ಸಂಬಳ ವಿಷಯವಾಗಿ ತಪ್ಪು ಅಭಿಪ್ರಾಯದಿಂದ, ಉದ್ದೇಶ ಪೂರ್ವಕವಾಗಿ ತೊಂದರೆ ಕೊಡುವ ಉದ್ದೇಶದಿಂದ ಪ್ರಕರಣ ದಾಖಲಿಸಿರುವುದಾಗಿ ತಿಳಿಸಿರುತ್ತಾರೆ.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯಿತಿ, ಮೈಸೂರು ಜಿಲ್ಲೆ, ರವರು ಸಲ್ಲಿಸಿರುವ ವರದಿಯಯನ್ನು ಪರಿಶೀಲಿಸಲಾಗಿದ್ದು ಹಾಗೂ ಶ್ರೀಮತಿ ಗೀತಾ, ಅಧ್ಯಕ್ಷರು, ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಈ ಪ್ರಕರಣದಲ್ಲಿನ ವಾಸ್ತವಾಂಶಗಳನ್ನು ಸರ್ಕಾರವು ಪರಿಶೀಲಿಸಿದ್ದು, ಸಂಬಂಧಪಟ್ಟ ದಾಖಲೆಗಳನ್ನು ಹಾಗೂ ವಿವರಗಳನ್ನು ಪರಿಶೀಲಿಸಿ, ಶ್ರೀಮತಿ ಗೀತಾ, ಅಧ್ಯಕ್ಷರು, ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ರವರು ಕಾರಣ ಕೇಳುವ ನೋಟೀಸಿಗೆ ನೀಡಿರುವ ಸಮಜಾಯಿಷಿ ಸಮಂಜಸವಾಗಿಲ್ಲದಿರುವುದರಿಂದ ಮತ್ತು ಅದನ್ನು ಒಪ್ಪಿಕೊಳ್ಳಲು ಸೂಕ್ತ ಕಾರಣಗಳನ್ನು ನೀಡದಿರುವ ಹಿನ್ನೆಲೆಯಲ್ಲಿ, ಮೇಲ್ನೋಟಕ್ಕೆ ಅವರು ದುರ್ನಡತೆಯು ಸಾಭಿತಾಗಿರುತ್ತದೆ. ಆದ್ದರಿಂದ ಅವರನ್ನು ಅಧ್ಯಕ್ಷ ಸ್ಥಾನದಿಂದ ತೆಗೆದು ಹಾಕಲು ನಿರ್ಣಯಿಸಿದೆ. ಅದರಂತೆ ಈ ಕೆಳಕಂಡ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ/672/ಗ್ರಾಪಂಕಾ/2017**
**ಬೆಂಗಳೂರು, ದಿನಾಂಕ: 27-06-2017**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀಮತಿ ಗೀತಾ, ಅಧ್ಯಕ್ಷರು, ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ ಇವರನ್ನು ತಕ್ಷಣದಿಂದ ಜಾರಿಗೆ ಬರುವಂತೆ ಕರ್ನಾಟಕ ಪಂಚಾಯತ್ ರಾಜ್ ಅಧಿನಿಯಮ 1993 ರ ಪ್ರಕರಣ 48(4) ರನ್ವಯ ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ ಅಧ್ಯಕ್ಷ ಸ್ಥಾನದಿಂದ ತೆಗೆದುಹಾಕಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಟಿ.ಪಿ. ಅರುಣ್‌ಕುಮಾರ್)
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

**ಪ್ರತಿಗಳು:**

1) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಮೈಸೂರು ಜಿಲ್ಲೆ,
2) ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ.
3) ಶ್ರೀಮತಿ ಗೀತಾ, ಅಧ್ಯಕ್ಷರು, ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ
4) ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಚಾಮುಂಡಿಬೆಟ್ಟ ಗ್ರಾಮ ಪಂಚಾಯತಿ, ಮೈಸೂರು ತಾಲ್ಲೂಕು ಮತ್ತು ಜಿಲ್ಲೆ.
5) ಗಣಕ ಕೋಶ.
6) ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.